**ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ,**

**ಖಾನಾಪೂರ.**

**ಸಿ.ಸಿ ನಂ: 101/2021**

**ಪಿ.ಡಬ್ಲ್ಯೂ - 6**

**ಸಿ.ಡಬ್ಲ್ಯೂ - 2**

ಹೆಸರು : ಅಪ್ಪಣ್ಣ ಗಣೇಶ ಪಾಟೀಲ

ವಯಸ್ಸು : 60 ವರ್ಷ

ಉದ್ಯೋಗ : ಶೇತ್ಕಿ

ವಾಸ : ಲೋಕೊಳ್ಳಿ, ತಾಃ ಖಾನಾಪೂರ

ದಿನಾಂಕ 22-07-2025 ರಂದು ಸಾಕ್ಷಿಗೆ ಪ್ರಮಾಣ ಬೋಧಿಸಲಾಯಿತು.

ಮುಖ್ಯ ವಿಚಾರಣೆ : ಸಸಅ ರವರಿಂದ

ಚಾಸಾ 1 ಮತ್ತು 3 ರವರ ಪರಿಚಯವಿದೆ.

ಸಾಕ್ಷಿದಾರರಿಗೆ ಈಗ ಮಹಜರನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಮಹಜರನ್ನು ಈಗಾಗಲೇ ನಿ.ಪಿ.2 ಎಂದು ಗುರುತಿಸಲಾಗಿದೆ, ಸಾಕ್ಷಿದಾರರ ಸಹಿಯನ್ನು ನಿ.ಪಿ.2-ಸಿ ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 4 ವರ್ಷಗಳ ಹಿಂದೆ ಮಾಡಿರುತ್ತೇನೆ. ಮಹಜರದಲ್ಲಿ ಬರೆದಿರುವ ವಿಚಾರಗಳು ಗೊತ್ತಿಲ್ಲ. ನನ್ನ ಮುಂದೆ ಯಾವುದೇ ಪಂಚನಾಮೆಯನ್ನು ಮಾಡಿರುವುದಿಲ್ಲ. ಸಾಕ್ಷಿದಾರರು ನಿಪಿ-3 ಮತ್ತು

4 ಫೋಟೋಗಳನ್ನು ನೋಡಿ ಗುರುತಿಸಿದ್ದು ಇರುತ್ತದೆ. ಸದರಿ ಫೋಟೋಗಳನ್ನು ಏಕೆ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

**(ಸಾಕ್ಷಿಯು ಪ್ರತಿಕೂಲವಾಗಿ ಸಾಕ್ಷ್ಯ ನುಡಿಯುತ್ತಿದ್ದುದರಿಂದ ಸಸಅ ರವರ ಕೋರಿಕೆಯ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಸಸಅ ರವರಿಗೆ ವಾಟೀ ಸವಾಲು ಮಾಡಲು ಅನುಮತಿಸಲಾಯಿತು.)**

**ವಾಟೀ ಸವಾಲುಃ ಸಸಅ ರವರಿಂದ**

ದಿಃ 25.09.2020 ರಂದು ಮುಂಜಾನೆ 10 ರಿಂದ 11.00 ಗಂಟೆವರೆಗೆ ಚಾಸಾ 1 ರವರು ತೋರಿಸಿದ ಘಟನಾ ಸ್ಥಳದ ಪಂಚನಾಮಯನ್ನು ನನ್ನ ಹಾಗೂ ಚಾಸಾ 3 ರವರ ಸಮಕ್ಷಮ ಮಾಡಿದರೆಂದರೆ ಸರಿಯಲ್ಲ, ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೆನೆಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿತರ ಪರ ವಿ ಎಸ್ ಎಚ್ ವಕೀಲರಿಂದಃ**

ಪಾಟೀ ಸವಾಲು ಇರುವುದಿಲ್ಲ.

ಮರುವಿಚಾರಣೆಃ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆ ಮೇರೆಗೆ ಬೆರಳಚ್ಚು ಮಾಡಲಾಯಿತು)
ಓ. ಹೇ. ಕೆ. ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಖಾನಾಪೂರ.